# ಮಂಗಳೂರು ವಿಶ್ವವಿದ್ಯಾನಿಲಯ

ಸಂಖ್ಯೆ: ಮವಿ/ಬಿ.ಎಡ್(ODL)/ಸಿ.ಆರ್.06/2020-21/ಇ.29

ಕುಲಸಚಿವ (ಪರೀಕ್ಷಾಂಗ)ರ ಕಛೇರಿ,
ಮಂಗಳಗಂಗೋತ್ರಿ – 574 199
ದಿನಾಂಕ: 10.10.2022

## ಪರಿಷ್ಕೃತ ಪ್ರಕಟಣೆ

**ವಿಷಯ:** 2022ರ ನವೆಂಬರ್ ತಿಂಗಳಲ್ಲಿ ದೂರಶಿಕ್ಷಣ ಕಾರ್ಯಕ್ರಮದ ಬಿ.ಎಡ್ (ODL) ಕೋರ್ಸಿನ ಪ್ರಥಮ(ಪುನಾರವರ್ತಿತ) ಮತ್ತು ದ್ವಿತೀಯ (ಆವರ್ತಿತ ಹಾಗೂ ಪುನರಾವರ್ತಿತ)ವರ್ಷದ ವಾರ್ಷಿಕ ಪರೀಕ್ಷೆಗಳನ್ನು ನಡೆಸುವ ಕುರಿತು.

**ಉಲ್ಲೇಖ :** ಕುಲಸಚಿವರ ಕಛೇರಿ ಪತ್ರ ಸಂಖ್ಯೆ : ಎಂಯು/ಎಸಿಸಿ/ಬಿ.ಎಡ್-ಕ್ಯಾಲ್/ಸಿಆರ್4/2020-21/ಎ6 ದಿನಾಂಕ : 29.12.2021.

-----

ಮಂಗಳೂರು ವಿಶ್ವವಿದ್ಯಾನಿಲಯದ ದೂರಶಿಕ್ಷಣ ಕಾರ್ಯಕ್ರಮದ ಪ್ರಥಮ ಮತ್ತು ದ್ವಿತೀಯ ವರ್ಷದ ಬಿ.ಎಡ್ (ODL) ಕೋರ್ಸಿನ ಪರೀಕ್ಷೆಗಳು **21 ನವೆಂಬರ್ 2022** ರಿಂದ ಈ ಕೆಳಗೆ ನಮೂದಿಸಿರುವ ಪರೀಕ್ಷಾ ಕೇಂದ್ರಗಳಲ್ಲಿ ಜರುಗಲಿರುವುದು.

**ಪರೀಕ್ಷಾ ಕೇಂದ್ರಗಳು : –**

| | |
|---|---|
| 01 | **Sri. Sai Shankar College of Education, Ponnampet, Virajpet, Kodagu.** |
| 02 | **Leelavathi Shetty College of Education, Vidyanagar, Panjimogaru Mangalore - 575 013.** |
| 03 | **St Aloysius Institute of Education, P.B No 720, Kodialbail, Mangalore - 575 003.** |
| 04 | **Shree Gokarnanatheshwara College of Education, Gandhi Nagar, Mangalore -575 003.** |
| 05 | **Alva's College of Education, Sundari Ananda Alva Campus, Vidyagiri Moodbidri 574 227.** |
| 06 | **Beary's College of Education, Beach Road Kodi, Kunadapura 576 217 -Udupi dist.** |
| 07 | **Sarvodaya College of Education, Ambatti Virajpet, Kodagu dist 571 218.** |

ಪರೀಕ್ಷೆಗೆ ಅರ್ಹರಾದ ವಿದ್ಯಾರ್ಥಿಗಳು ಪರೀಕ್ಷಾ ಶುಲ್ಕವನ್ನು ಡಿ.ಡಿ ಯಾ ಚಲನ್ ಮೂಲಕ ಪಾವತಿಸಿ ವಿಶ್ವವಿದ್ಯಾನಿಲಯ ಒದಗಿಸಿದ **ಕಂಪ್ಯೂಟರೀಕೃತ ಅರ್ಜಿಯಲ್ಲಿ ತಮಗೆ ಹಂಚಿಕೆಯಾದ ಪರೀಕ್ಷಾ ಕೇಂದ್ರವನ್ನು ನಮೂದಿಸಿ ನಿರ್ದೇಶಕರು, ದೂರ ಶಿಕ್ಷಣ ಕೇಂದ್ರ, ಮಂಗಳೂರು ವಿಶ್ವವಿದ್ಯಾನಿಲಯ,ಮಂಗಳಗಂಗೋತ್ರಿ–574199** ಇವರಿಗೆ ದಿನಾಂಕ: **03.11.2022** ರೊಳಗಾಗಿ ಅಂಚೆ ಅಥವಾ ಮುದ್ದಾಂ ತಲುಪಿಸುವಂತೆ ತಿಳಿಸಲಾಗಿದೆ.

**ಪರೀಕ್ಷಾ ಶುಲ್ಕವನ್ನು ಕಟ್ಟಲು ನಿಗದಿಪಡಿಸಲಾದ ಅಂತಿಮ ದಿನಾಂಕ:**

ದಂಡಶುಲ್ಕ ರಹಿತ – **25.10.2022**

ದಂಡಶುಲ್ಕ ದಿನವೊಂದಕ್ಕೆ ರೂ. 55/–ರಂತೆ – **26.10.2022 ರಿಂದ 30.10.2022 ರವರೆಗೆ**

**ನಿಗದಿಪಡಿಸಿರುವ ಪರೀಕ್ಷಾ ಶುಲ್ಕದ ದರಗಳು:**

**ಪೂರ್ಣ ಪರೀಕ್ಷೆಗೆ** : ರೂ. 1,100.00 + ಅಂಕಪಟ್ಟಿ ಶುಲ್ಕ ರೂ. : 230.00 + ಅರ್ಜಿ ಶುಲ್ಕ ರೂ. 120.00
: **ಒಟ್ಟು ರೂ 1,450.00**

**ವಿಷಯವೊಂದಕ್ಕೆ** : **ರೂ. 300.00**

**ಮೇಲೆ ನಿಗದಿಪಡಿಸಿದ ಪರೀಕ್ಷಾ ಶುಲ್ಕದ ಜೊತೆಗೆ ಪ್ರತಿ ಪರೀಕ್ಷೆಗೆ ರೂ. 230/- ಅಂಕಪಟ್ಟಿ ಶುಲ್ಕ ಮತ್ತು ರೂ. 120.00 ಅರ್ಜಿ ಶುಲ್ಕಗಳನ್ನು ಪಾವತಿಸತಕ್ಕದ್ದು.**

**ಸೂಚನೆ: ದಿನಾಂಕ: 31.10.2022 ರ ನಂತರ ಶುಲ್ಕ ಪಾವತಿಸಿ ಬಂದ ಅರ್ಜಿಗಳನ್ನು ತಿರಸ್ಕರಿಸಲಾಗುವುದು.**

ದಕ್ಷಿಣ ಕನ್ನಡ / ಉಡುಪಿ / ಕೊಡಗು ಜಿಲ್ಲೆಯ ವಿದ್ಯಾರ್ಥಿಗಳು ಈ ಕೆಳಕಂಡ ಬ್ಯಾಂಕ್ ಶಾಖೆಗಳಲ್ಲಿ ಪರೀಕ್ಷಾ ಅರ್ಜಿಯೊಂದಿಗಿರುವ ಚಲನ್ ಉಪಯೋಗಿಸಿ, "ದೂರಶಿಕ್ಷಣ ನಿರ್ದೇಶನ ಕೇಂದ್ರ-06, ಪರೀಕ್ಷಾ ಶುಲ್ಕ" ಈ ಲೆಕ್ಕ ಶೀರ್ಷಿಕೆಗೆ ಪರೀಕ್ಷಾ ಶುಲ್ಕವನ್ನು ಪಾವತಿಸುವುದು. ಇತರೇ ಹೊರ ಜಿಲ್ಲೆಗಳ ವಿದ್ಯಾರ್ಥಿಗಳು ಡಿ.ಡಿ.ಯನ್ನು **The Finance Officer, Mangalore University, Mangalagangotri** ಇವರ ಹೆಸರಿಗೆ ಯಾವುದೇ ರಾಷ್ಟ್ರೀಕೃತ ಬ್ಯಾಂಕುಗಳ ಮೂಲಕ ಪಡೆದು ಪಾವತಿಸುವುದು. ಪರೀಕ್ಷಾ ಅರ್ಜಿಯಲ್ಲಿ ನೋಂದಣಿ ಸಂಖ್ಯೆ, ಪರೀಕ್ಷಾ ಕೇಂದ್ರದ ಹೆಸರು ಹಾಗೂ ಚಲನ್ ಮೇಲೆ ನೋಂದಣಿ ಸಂಖ್ಯೆಯನ್ನು ಬರೆದು ಚಲನಿನ ನಾಲ್ಕನೇ ಮೂಲ ಪ್ರತಿಯನ್ನು ಪರೀಕ್ಷಾ ಅರ್ಜಿಯೊಂದಿಗೆ ಲಗತ್ತಿಸುವುದು.

| ದಕ್ಷಿಣ ಕನ್ನಡ | ಉಡುಪಿ | ಕೊಡಗು |
|---|---|---|
| 1) ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ, ಮಂಗಳಗಂಗೋತ್ರಿ / ಮೈನ್ ಬ್ರಾಂಚ್, ಮಂಗಳೂರು / ಜನತಾ ಬಜಾರ್ ಕಟ್ಟಡ, ಮಂಗಳೂರು. / ಶ್ರೀಕ್ಷೇತ್ರ ಕಾಂಪ್ಲೆಕ್ಸ್, ಬೆಳ್ತಂಗಡಿ.<br>2) ಬ್ಯಾಂಕ್ ಆಫ್ ಬರೋಡ, ಮಂಗಳಗಂಗೋತ್ರಿ/ಬೆಳ್ಳಾರೆ<br>3) ಕೆನರಾ ಬ್ಯಾಂಕ್, ಬಲ್ಮಠ/ ಕೊಡಿಯಾಲ್‌ಬೈಲ್ / ಸುರತ್ಕಲ್/ನೂರ್‌ಕಾಂಪ್ಲೆಕ್ಸ್,ಮುಲ್ಕಿ /ಮೂಡಬಿದ್ರೆ<br>4) ಕಾರ್ಪೋರೇಷನ್ ಬ್ಯಾಂಕ್, ಕಾರ್‌ಸ್ಟ್ರೀಟ್, ಬಂಟ್ವಾಳ/ ಜಿ.ಎಲ್.ಕಾಂಪ್ಲೆಕ್ಸ್, ಮೈನ್ ರೋಡ್, ಪುತ್ತೂರು | ಕೆನರಾ ಬ್ಯಾಂಕ್, ಕುಂಜಿಬೆಟ್ಟು/ ಬ್ರಹ್ಮಾವರ / ವೊಡೇರ್‌ಹೊಬ್ಳಿ/ ಕಾರ್ಕಳ | 1) ಕೆನರಾ ಬ್ಯಾಂಕ್, ಮಡಿಕೇರಿ ವೆಸ್ಟ್<br>2) ಬ್ಯಾಂಕ್ ಆಫ್ ಬರೋಡ, ವಿರಾಜಪೇಟೆ / ಸೋಮವಾರಪೇಟೆ |

**<u>ವಿದ್ಯಾರ್ಥಿಗಳು ಗಮನಿಸಬೇಕಾದ ಸೂಚನೆಗಳು</u>**

01. ವಿದೇಶೀ ಅಭ್ಯರ್ಥಿಗಳು ನಿಗದಿಪಡಿಸಿದ ಶುಲ್ಕದ ಮೂರು ಪಟ್ಟು ಶುಲ್ಕವನ್ನು ಪಾವತಿಮಾಡತಕ್ಕದ್ದು.
02. ಪ್ರಥಮ ಬಾರಿಗೆ ಪರೀಕ್ಷೆಗೆ ಹಾಜರಾಗಲಿರುವ ಅಭ್ಯರ್ಥಿಗಳು ಎಲ್ಲಾ ವಿಷಯಗಳಲ್ಲಿ ಮತ್ತು ಪತ್ರಿಕೆಗಳಿಗೆ ಕಡ್ಡಾಯವಾಗಿ ನೋಂದಣಿ ಮಾಡತಕ್ಕದ್ದು.
03. ಒಮ್ಮೆ ಪಾವತಿಸಿದ ಪರೀಕ್ಷಾ ಶುಲ್ಕವನ್ನು ಯಾವುದೇ ಕಾರಣದಿಂದಲೂ ಹಿಂದಿರುಗಿಸಲಾಗುವುದಿಲ್ಲ ಅಥವಾ ಹೊಂದಾಣಿಕೆ ಮಾಡಿಕೊಳ್ಳಲಾಗುವುದಿಲ್ಲ.
04. ಕನ್ನಡ ಮಾಧ್ಯಮದಲ್ಲಿ ಉತ್ತರಿಸಬಯಸುವ ವಿದ್ಯಾರ್ಥಿಗಳು ಈ ಕೋರಿಕೆಯನ್ನು ಪರೀಕ್ಷಾ ಅರ್ಜಿಯಲ್ಲಿ ನಮೂದಿಸಬೇಕು.
05. ಪರೀಕ್ಷಾ ಪ್ರವೇಶ ಪತ್ರವನ್ನು ವಿದ್ಯಾರ್ಥಿಗಳಿಗೆ ಅಂಚೆ ಮೂಲಕ ರವಾನಿಸಲಾಗುವುದಿಲ್ಲ. ಪರೀಕ್ಷೆಗಳು ಪ್ರಾರಂಭವಾಗುವುದಕ್ಕೆ ಎರಡು ದಿನ ಮುಂಚಿತವಾಗಿ ಅಭ್ಯರ್ಥಿಗಳು ಅವರವರ ಪರೀಕ್ಷಾ ಕೇಂದ್ರಗಳಲ್ಲಿ ತಮ್ಮ ಗುರುತಿನ ಕಾರ್ಡುಗಳನ್ನು ಹಾಜರುಪಡಿಸಿ ಪ್ರವೇಶ ಪತ್ರವನ್ನು ಪಡೆಯಬೇಕು. ಪರೀಕ್ಷೆಯು ನಡೆಯುತ್ತಿರುವ ಸಂದರ್ಭಗಳಲ್ಲಿ ವಿದ್ಯಾರ್ಥಿಯು ಗುರುತಿನ ಕಾರ್ಡನ್ನು ಕಡ್ಡಾಯವಾಗಿ ಹೊಂದಿರಲೇಬೇಕು. ಇಲ್ಲವಾದರೆ ಪರೀಕ್ಷೆ ಬರೆಯಲು ಅವಕಾಶ ನೀಡಲಾಗುವುದಿಲ್ಲ.
06. ಪರೀಕ್ಷಾ ಅರ್ಜಿಯನ್ನು ಕಳುಹಿಸುವ ಮೊದಲು ಅರ್ಜಿಯ ಎಲ್ಲಾ ಅಂಕಣಗಳನ್ನು ಪೂರ್ಣವಾಗಿ/ಸರಿಯಾಗಿ ಭರ್ತಿ ಮಾಡಿದೆಯೇ ಎಂದು ಖಾತರಿಪಡಿಸಿಕೊಳ್ಳಬೇಕು. ಮೂಲ ಚಲನ್ ಪ್ರತಿಯನ್ನು ಅಡಕಗೊಳಿಸಿದೆಯೇ ಎಂಬುದನ್ನು ಖಾತ್ರಿಪಡಿಸಿಕೊಂಡು ಕಳುಹಿಸಿಕೊಡಬೇಕು. ಅಪೂರ್ಣವಾದ ಅರ್ಜಿಗಳನ್ನು ತಿರಸ್ಕರಿಸಲಾಗುವುದು. ಈ ಸಂಬಂಧವಾಗಿ ಯಾವುದೇ ಪತ್ರ ವ್ಯವಹಾರಕ್ಕೂ ಅವಕಾಶವಿರುವುದಿಲ್ಲ. ಹೆಚ್ಚಿನ ಮಾಹಿತಿಗೆ ಅರ್ಜಿಯ ಹಿಂದೆ ಮುದ್ರಿಸಿರುವ ವಿವರವನ್ನು ಪರಿಶೀಲಿಸಿಕೊಳ್ಳತಕ್ಕದ್ದು.
07. ಪರೀಕ್ಷಾ ಶುಲ್ಕದ ಹಣವನ್ನು ಚೆಕ್ಕುಗಳು, ಮನಿಯಾರ್ಡರ್ ಅಥವಾ ಬ್ಯಾಂಕ್ ಡ್ರಾಫ್ಟ್‌ಗಳ ಮೂಲಕ ಕಳುಹಿಸಿದರೆ ಅವುಗಳನ್ನು ಅಂಗೀಕರಿಸಲಾಗುವುದಿಲ್ಲ.
08. ವಿಶ್ವವಿದ್ಯಾನಿಲಯದ ಕಾನೂನು ಮತ್ತು ನಿಯಮ–ನಿಬಂಧನೆಗಳ ಪ್ರಕಾರ ಯಾವುದೇ ಅಭ್ಯರ್ಥಿ ಪರೀಕ್ಷೆ ತೆಗೆದುಕೊಳ್ಳಲು ಅನರ್ಹರಾಗಿದ್ದ ಪಕ್ಷದಲ್ಲಿ, ಕೇವಲ ಪರೀಕ್ಷಾ ಶುಲ್ಕ ಸಂದಾಯ ಮಾಡಿ ಪರೀಕ್ಷಾ ಅರ್ಜಿಯನ್ನು ಸಲ್ಲಿಸಿದ ಮಾತ್ರಕ್ಕೆ ಆ ಅಭ್ಯರ್ಥಿಗಳಿಗೆ ಪರೀಕ್ಷೆ ತೆಗೆದುಕೊಳ್ಳುವ ಹಕ್ಕು ಇರುವುದಿಲ್ಲ. ಪರೀಕ್ಷಾ ಶುಲ್ಕ ಪಾವತಿಸದೇ ಪರೀಕ್ಷಾ ಕೇಂದ್ರದಲ್ಲಿ ತಪ್ಪು ಮಾಹಿತಿ ನೀಡಿ ಪರೀಕ್ಷೆ ಬರೆದರೆ ವಿಶ್ವವಿದ್ಯಾನಿಲಯವು ಜವಾಬ್ದಾರಿಯಾಗುವುದಿಲ್ಲ ಹಾಗೂ ಅಂತಹ ವಿದ್ಯಾರ್ಥಿಗಳ ಫಲಿತಾಂಶವನ್ನು ತಡೆಹಿಡಿಯಲಾಗುವುದು.
09 ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಕ್ಕೆ ಸೇರಿದ ವಿದ್ಯಾರ್ಥಿಗಳು ಮತ್ತು ಇತರ ಮೀಸಲಾತಿ ವರ್ಗಗಳಿಗೆ ಸೇರಿದ ವಿದ್ಯಾರ್ಥಿಗಳೂ ಸಹ ಈ ಮೇಲೆ ನಮೂದಿಸಿರುವ ಪರೀಕ್ಷಾ ಶುಲ್ಕವನ್ನು ಪೂರ್ಣವಾಗಿ ಪಾವತಿಸಬೇಕು.

ನಿರ್ದೇಶಕರು, ದೂರ ಶಿಕ್ಷಣ ಕೇಂದ್ರ, ಮಂಗಳೂರು ವಿಶ್ವವಿದ್ಯಾನಿಲಯ, ಮಂಗಳಗಂಗೋತ್ರಿ ಇವರು ತಮ್ಮಲ್ಲಿ ಸ್ವೀಕೃತಿಯಾದಂತಹ ಎಲ್ಲಾ ಅರ್ಜಿಗಳನ್ನು ಕ್ರೋಢೀಕರಿಸಿ/ಪುನರ್ ಪರಿಶೀಲಿಸಿ ವಿಶ್ವವಿದ್ಯಾನಿಲಯದ ಅಧಿಕೃತ ಅಂತರ್ಜಾಲ ತಾಣದಲ್ಲಿ ನೀಡಲಾದ ಪರೀಕ್ಷಾ ಗಣಕೀಕರಣ ಸಂಬಂಧಿತ ಲಿಂಕ್ ಐಡಿ : <u>www.mulinx.net/MuLinx/Set up.exe</u> ಗೆ sign-up ಆಗಿ ಆನ್‌ಲೈನ್ ಮೂಲಕ ದಿನಾಂಕ 05.11.2022ರ ಒಳಗಾಗಿ ಅಪ್‌ಲೋಡ್ ಮಾಡಿ ಕ್ರೋಢೀಕರಿಸಿದ ಅಭ್ಯರ್ಥನಾ ಪಟ್ಟಿಯನ್ನು ಈ ಕಛೇರಿಗೆ ದಿನಾಂಕ 09.11.2022 ರೊಳಗಾಗಿ ಕಳುಹಿಸಿಕೊಡತಕ್ಕದ್ದು.

ವಿ.ಸೂ: ಸ್ವೀಕೃತಿಯಾದಂತಹ ಎಲ್ಲಾ ಅರ್ಜಿಗಳನ್ನು ಕ್ರೋಢೀಕರಿಸಿ/ಪುನರ್ ಪರಿಶೀಲಿಸಿ ವಿಶ್ವವಿದ್ಯಾನಿಲಯದ ಅಧಿಕೃತ ಅಂತರ್ಜಾಲ ತಾಣದಲ್ಲಿ ನೀಡಲಾದ ಪರೀಕ್ಷಾ ಗಣಕೀಕರಣ ಸಂಬಂಧಿತ ಲಿಂಕ್ ಐಡಿ : www.mulinx.net/MuLinx/Setup.exe ಗೆ sign-up ಆಗಿ ಕಡ್ಡಾಯವಾಗಿ Online ಮೂಲಕ ವಿವರಗಳನ್ನು ಅಪ್‌ಲೋಡ್ ಮಾಡತಕ್ಕದ್ದು,

10.10.2021

ಕುಲಸಚಿವರು (ಪರೀಕ್ಷಾಂಗ)

**ರಿಗೆ:** ನಿರ್ದೇಶಕರು, ದೂರ ಶಿಕ್ಷಣ ಕೇಂದ್ರ, ಮಂಗಳೂರು ವಿಶ್ವವಿದ್ಯಾನಿಲಯ ಮಂಗಳಗಂಗೋತ್ರಿ.

ಪ್ರತಿ:

01 The Principal University College, Hampanakatte Mangalore – 575 001.
02 The Principal Sri. Sai Shankar College of Education, Ponnampet, Virajpet, Kodagu.
03 The Principal Leelavathi Shetty College of Education Vidyanagar Panjimogaru Mangalore - 575 013
04 The Principal St Aloysius Institute of Education P.B No 720, Kodialbail Mangalore - 575 003
05 The Principal Shree Gokarnanatheshwara College of Education Gandhi Nagar Mangalore -575 003
06 The Principal Beary's College of Education, Beach Road Kodi Kunadapura 576 217 -Udupi dist
07 The Principal Alva's College of Education Sundari Ananda Alva Campus Vidyagiri Moodbidri 574 227
08 The Principal Sarvodaya College of Education Ambatti Virajpet Kodagu dist 571 218
09 ಕುಲಸಚಿವರು/ಹಣಕಾಸು ಅಧಿಕಾರಿಯವರು, ಮಂಗಳೂರು ವಿಶ್ವವಿದ್ಯಾನಿಲಯ, ಮಂಗಳಗಂಗೋತ್ರಿ.
10 ವಿಶೇಷಾಧಿಕಾರಿ (ಪರೀಕ್ಷಾಂಗ)/ಸಹಾಯಕ ಕುಲಸಚಿವರು (ಪರೀಕ್ಷಾಂಗ), ಮಂಗಳೂರು ವಿಶ್ವವಿದ್ಯಾನಿಲಯ.
11 ಮಾನ್ಯ ಕುಲಪತಿಯವರ ಆಪ್ತ ಸಹಾಯಕರು, ಮಂಗಳೂರು ವಿಶ್ವವಿದ್ಯಾನಿಲಯ.
12 ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಮಂಗಳೂರು ವಲಯ
13 ಅಧೀಕ್ಷಕರು ಎಸ್.1, ಎಸ್.2, ಎಸ್.3, ಎಸ್.4. ಎಸ್.6.
14 ಸಿಸ್ಟಂ ಅನಾಲಿಸ್ಟ್ ಆ್ಯಂಡ್ ಪ್ರೋಗ್ರಾಮರ್, ಕುಲಸಚಿವರು (ಪರೀಕ್ಷಾಂಗ)ರ ಕಛೇರಿ, ಮಂಗಳೂರು ವಿಶ್ವವಿದ್ಯಾನಿಲಯ.
15 ಆಪ್ತ ಸಹಾಯಕರು, ಕುಲಸಚಿವರು (ಪರೀಕ್ಷಾಂಗ), ಮಂಗಳೂರು ವಿಶ್ವವಿದ್ಯಾನಿಲಯ, ಮಂಗಳಗಂಗೋತ್ರಿ.
16 ಇ.9/ಇ.10/ಇ.11/ ಕಾರ್ಯನಿರ್ವಾಹಕರು ಕುಲಸಚಿವರು (ಪರೀಕ್ಷಾಂಗ), ಮಂಗಳೂರು ವಿಶ್ವವಿದ್ಯಾನಿಲಯ, ಮಂಗಳಗಂಗೋತ್ರಿ